ಪತ್ರಿಕಾ ಟಿಪ್ಪಣಿ

(ಬೆಂಗಳೂರು, 20-12-2021)

ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಮುಂಬರುವ 2023ರ ವಿಧಾನಸಭಾ ಚುನಾವಣೆಗೆ ತಯಾರಿ ನಡೆಸಿದ್ದು, ಎಲ್ಲಾ ಕ್ಷೇತ್ರಗಳಿಗೆ ಸಂಭಾವ್ಯ ಅಭ್ಯರ್ಥಿಗಳನ್ನು ಸಿದ್ಧ ಮಾಡುತ್ತಿದೆ. ಈ ನಿಟ್ಟಿನಲ್ಲಿ ಡಿಸೆಂಬರ್ 4, 5, 11 ಮತ್ತು 12ನೇ ತಾರೀಕಿನಂದು ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ಆಕಾಂಕ್ಷಿಗಳ ಸಂದರ್ಶನವನ್ನು ರಾಜ್ಯಾಧ್ಯಕ್ಷರಾದ ರವಿ ಕೃಷ್ಣಾರೆಡ್ಡಿ ಮತ್ತು ಉಪಾಧ್ಯಕ್ಷರಾದ ಲಿಂಗೇಗೌಡ ಎಸ್. ಎಚ್. ಅವರುಗಳ ನೇತೃತ್ವದ ರಾಜ್ಯ ಸಮಿತಿಯ ಪದಾಧಿಕಾರಿಗಳು ನಡೆಸಿತು. ಒಟ್ಟು 123 ಆಕಾಂಕ್ಷಿಗಳು ಅರ್ಜಿ ಸಲ್ಲಿಸಿದ್ದು, ಅವರಲ್ಲಿ 70 ಆಕಾಂಕ್ಷಿಗಳು ಸಂದರ್ಶನಕ್ಕೆ ಹಾಜರಾಗಿದ್ದರು. ಇವರಲ್ಲಿ ಪ್ರಾದೇಶಿಕ, ಪ್ರಾಮಾಣಿಕ ಮತ್ತು ಜನಪರ ರಾಜಕಾರಣದಲ್ಲಿ ದೃಢವಾದ ನಂಬಿಕೆ ಇಟ್ಟು, ಕೆ.ಆರ್.ಎಸ್ ಪಕ್ಷದ ತತ್ವ, ನೀತಿ ಮತ್ತು ನಿಯಮಗಳ ಅಡಿಯಲ್ಲಿ ಜನಪರವಾಗಿ ಕೆಲಸ ಮಾಡುವವರು ಮೊದಲ ಹಂತದ ಈ ಪ್ರಕ್ರಿಯೆಯಲ್ಲಿ 50 ಸಂಭಾವ್ಯ ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಅದರಲ್ಲಿ ಪ್ರಥಮ ಪಟ್ಟಿಯನ್ನು ಇಂದು ಬಿಡುಗಡೆ ಮಾಡಲಾಗುತ್ತಿದೆ. ಉಳಿದ ಕ್ಷೇತ್ರಗಳಿಗೆ ಮುಂದಿನ ದಿನಗಳಲ್ಲಿ ಇದೇ ರೀತಿಯ ಪ್ರಕ್ರಿಯೆಯನ್ನು ಹಮ್ಮಿಕೊಂಡು ಸಂಭಾವ್ಯ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಪಕ್ಷದಲ್ಲಿ ಆಂತರಿಕ ಪ್ರಜಾಪ್ರಭುತ್ವವನ್ನು, ಅಧಿಕಾರ ವಿಕೇಂದ್ರೀಕರಣ ಮತ್ತು ಎಲ್ಲಾ ಹಂತಗಳ ಅಭ್ಯರ್ಥಿಗಳ ಆಯ್ಕೆಯಲ್ಲಿ ಪಾರದರ್ಶಕತೆಯನ್ನು ಗಟ್ಟಿಗೊಳಿಸುವ ಪ್ರಕ್ರಿಯೆ ನಿರಂತರವಾಗಿ ನಡೆದಿದ್ದು, ಪ್ರಸ್ತುತ ಪ್ರಕ್ರಿಯೆಯೂ ಕೂಡ ಇದರ ಭಾಗವಾಗಿದೆ. ಮುಂದಿನ ದಿನಗಳಲ್ಲಿ ಅಭ್ಯರ್ಥಿಗಳ ಆಯ್ಕೆಯನ್ನು ಪಕ್ಷದ ಪ್ರಾಥಮಿಕ ಚುನಾವಣೆಗಳ ಮೂಲಕ ಆಯ್ಕೆ ಮಾಡುವ ಪದ್ಧತಿಯನ್ನು ಜಾರಿಗೊಳಿಸಲಾಗುವುದು.

ಈ ಸಂಭಾವ್ಯ ಅಭ್ಯರ್ಥಿಗಳಿಗೆ ಮುಂದಿನ ದಿನಗಳಲ್ಲಿ ಪ್ರಾಮಾಣಿಕ, ಸ್ವಚ್ಛ, ಜನಪರ ರಾಜಕಾರಣದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮತ್ತು ಚುನಾವಣೆಗಳಲ್ಲಿ ಹಣ, ಹೆಂಡ ಹಂಚದೆ, ಆಮಿಷಗಳನ್ನು ಒಡ್ಡದೆ ಸ್ಪರ್ಧಿಸಲು ತಯಾರಿ ಮಾಡಲಾಗುವುದು. ಜೊತೆಗೆ ಅವರುಗಳು ಈಗಿನಿಂದಲೇ ಚುನಾವಣಾ ಪ್ರಚಾರದಲ್ಲಿ ತೊಡಗಿಸಿಕೊಳ್ಳುವರು. ಈ ನಿಟ್ಟಿನಲ್ಲಿ ಈಗಾಗಲೇ ಇಂದು ಪ್ರಕಟಿಸಿರುವ ಸಂಭಾವ್ಯ ಅಭ್ಯರ್ಥಿಗಳಿಗೆ ನಿರ್ದಿಷ್ಟ ಕೆಲಸಗಳನ್ನು ನೀಡಲಾಗಿದೆ. ಮುಂದಿನ ದಿನಗಳಲ್ಲಿ ಆಯಾ ಕ್ಷೇತ್ರದಲ್ಲಿ ಪಕ್ಷ ಸಂಘಟನೆಯಲ್ಲಿ, ಜನಪರ ಕೆಲಸದಲ್ಲಿ ಮತ್ತು ಪ್ರಚಾರದಲ್ಲಿ ಯಾವ ರೀತಿಯಲ್ಲಿ ತೊಡಗಿಸಿಕೊಳ್ಳುವರು ಎಂಬ ಆಧಾರದ ಮೇಲೆ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಲಾಗುವುದು.

ರಾಜ್ಯದಲ್ಲಿನ ಭ್ರಷ್ಟ ಜೆ.ಸಿ.ಬಿ (ಜೆಡಿಎಸ್, ಕಾಂಗ್ರೆಸ್, ಬಿಜೆಪಿ) ಪಕ್ಷಗಳು ಚುನಾವಣೆಗಳಲ್ಲಿ ಅಕ್ರಮಗಳನ್ನು ಎಸಗಿ, ಹಣ, ಹೆಂಡ ಹಂಚಿ, ಆಮಿಷಗಳನ್ನು ಒಡ್ಡಿ, ಜಾತಿ ಓಲೈಕೆ ರಾಜಕಾರಣ ಮತ್ತು ಕುಟುಂಬ ರಾಜಕಾರಣಕ್ಕೆ ಜೋತು ಬಿದ್ದಿವೆ. ಇವರ ತಂತ್ರಕ್ಕೆ ಪ್ರತಿಯಾಗಿ, ಸ್ವಚ್ಛ, ಜನಪರ ಮತ್ತು ಪ್ರಾಮಾಣಿಕ ರಾಜಕಾರಣದಲ್ಲಿ ನಂಬಿಕೆಯಿಟ್ಟಿರುವ ನಾವು ನಮ್ಮದೇ

ರೀತಿಯಲ್ಲಿ ಪ್ರತಿ ತಂತ್ರ ಮಾಡಬೇಕಿದೆ. ಇದಕ್ಕೆ ಬಹಳ ಪರಿಶ್ರಮದ ಅಗತ್ಯವಿದ್ದು, ಅದಕ್ಕಾಗಿ ನಾವು ಮುಂಚಿತವಾಗಿ ಸಂಭಾವ್ಯ ಅಭ್ಯರ್ಥಿಗಳನ್ನು ಘೋಷಿಸುತ್ತಿದ್ದೇವೆ. ಜನಪರ ಮತ್ತು ಭ್ರಷ್ಟಾಚಾರ ರಹಿತ ಆಡಳಿತ ಮತ್ತು ಪರಿಸರ ಸಂರಕ್ಷಿಸುವ ಕೆಲಸ ಇಂದಿನ ತುರ್ತಾಗಿದ್ದು, ಅದಕ್ಕಾಗಿ ಕೆ.ಆರ್.ಎಸ್ ಪಕ್ಷ ಸತತವಾಗಿ ಕೆಲಸ ಮಾಡುತ್ತಿದೆ ಹಾಗು ಹೋರಾಟ ಮಾಡುತ್ತಿದೆ.

ವಂದನೆಗಳು.

ದೀಪಕ್ ಸಿ. ಎನ್.
ಪ್ರಧಾನ ಕಾರ್ಯದರ್ಶಿ
ಕೆ.ಆರ್.ಎಸ್ ಪಕ್ಷ.
9449559451